# ಉದಯವಾಣಿ

**Friday 20th December 2024, Page No.02**


## RVCE: Convocation ceremony for postgraduate students

# ಆರ್.ವಿ. ಎಂಜಿನಿಯರಿಂಗ್ ಕಾಲೇಜು ವಿದ್ಯಾರ್ಥಿಗಳಿಗೆ ಪದವಿ ಪ್ರದಾನ

## ತಾಂತ್ರಿಕ ಕ್ಷೇತ್ರದಲ್ಲಿ ಹೊಸ ಸಂಶೋಧನೆ ಕೈಗೊಳ್ಳಿ: ಪರಶುರಾಮನ್ ಸಲಹೆ



**ಆರ್.ವಿ.ಎಂಜಿನಿಯರಿಂಗ್ ಕಾಲೇಜಿನಲ್ಲಿ ಎಂಜಿನಿಯರಿಂಗ್ ಸ್ನಾತಕೋತ್ತರ ಪದವೀಧರ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು.**

■ **ಉದಯವಾಣಿ ಸಮಾಚಾರ**

**ಕೆಂಗೇರಿ:** ಕಠಿಣ ಪರಿಶ್ರಮ, ನಿರ್ದಿಷ್ಟ ಗುರಿ, ಕ್ರಿಯಾಶೀಲತೆಯಿಂದ ಶ್ರಮವಹಿಸಿ ಹೊಸ ಸಂಶೋಧನೆ ಕೈಗೊಳ್ಳುವ ಮೂಲಕ ತಾಂತ್ರಿಕ ಕ್ಷೇತ್ರದಲ್ಲಿ ಆಮೂಲಾಗ್ರ ಬದಲಾವಣೆ ತರಲು ವಿದ್ಯಾರ್ಥಿಗಳಿಗೆ ಇದು ಅಮೃತ ಕಾಲ ಎಂದು ಕರ್ನಾಟಕ ರಾಜ್ಯ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ. ಆರ್.ಪರಶುರಾಮನ್ ತಿಳಿಸಿದರು.

ಮೈಸೂರು ರಸ್ತೆಯಲ್ಲಿರುವ ಆರ್.ವಿ. ಎಂಜಿನಿಯರಿಂಗ್ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಪದವಿ ಪ್ರದಾನ ಸಮಾರಂಭದಲ್ಲಿ 209 ಎಂಜಿನಿಯರಿಂಗ್ ಸ್ನಾತಕೋತ್ತರ ಪದವೀಧರ ವಿದ್ಯಾರ್ಥಿಗಳು ಹಾಗೂ 109 ಕಂಪ್ಯೂಟರ್ ಅಪ್ಲಿಕೇಶನ್ಸ್ ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ ಪದಕ ಮತ್ತು ಪ್ರಮಾಣ ಪತ್ರ ವಿತರಿಸಿ ಅವರು ಮಾತನಾಡಿದರು. ನಾವೀನ್ಯತೆ, ಛಲ, ಏಕಾಗ್ರತೆಯಿಂದ ಪರಿಶ್ರಮಪಟ್ಟರೆ ಸಾಧನೆ ಸಾಧ್ಯ ಎಂದರು.

ಇದೇ ವೇಳೆ ಶ್ರೇಷ್ಠ ಶೈಕ್ಷಣಿಕ ಸಾಧನೆಗಾಗಿ ಜೈವಿಕ ತಂತ್ರಜ್ಞಾನ ವಿಭಾಗದ ಟಿ.ವೈ.ಪಾರ್ನಿಕಾ ವಿದ್ಯಾರ್ಥಿನಿಗೆ ಗೌರವ ಪ್ರಶಸ್ತಿ ಪ್ರದಾನ ಮಾಡಲಾಯಿತು. ಆರ್ಎಸ್ಎಸ್‌ಟಿ ಅಧ್ಯಕ್ಷ ಡಾ.ಎಂ.ಪಿ.ಶ್ಯಾಮ್, ಸಹಾಯಕ ಕಾರ್ಯದರ್ಶಿ ನಿಖಿಲ್ ಮೂರ್ತಿ, ಪ್ರಾಂಶುಪಾಲ ಡಾ.ಎನ್. ಸುಬ್ರಹ್ಮಣ್ಯ, ಡಾ.ಗೀತಾ ಮತ್ತಿತರರಿದ್ದರು.